ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 701
2. ಮಾನ್ಯ ಸದಸ್ಯರ ಹೆಸರು : ಶ್ರೀ ದಿನೇಶ್ ಗೂಳಿಗೌಡ
3. ಉತ್ತರಿಸಬೇಕಾದ ದಿನಾಂಕ : 22.02.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿಹಾಗೂ ಸಕ್ಕರೆ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಮಂಡ್ಯ ಜಿಲ್ಲೆಯ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಯಾವಾಗ ಪ್ರಾರಂಭಿಸಲಾಗುವುದು;	ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ - ಈ ಕಾರ್ಖಾನೆಯನ್ನು 2 ವರ್ಷಗಳ ಅವಧಿಗೆ ಪ್ರಾಯೋಗಿಕವಾಗಿ ಸರ್ಕಾರಿ ಸ್ವಾಮ್ಯದಲ್ಲಿ ಪುನಶ್ಚೇತನಗೊಳಿಸಲು ದಿನಾಂಕ:18.10.2021 ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಸದರಿ ಸಭೆಯ ತೀರ್ಮಾನದಂತೆ ತಾಂತ್ರಿಕ ವರದಿಯನ್ನು ಪಡೆದು ಸಚಿವ ಸಂಪುಟದಲ್ಲಿ ಮಂಡಿಸಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭ ಮಾಡುವ ಬಗ್ಗೆ ತೀರ್ಮಾನಿಸಲಾಗುವುದು.
(ಆ)	ಕಾರ್ಖಾನೆಯನ್ನು ಪ್ರಾರಂಭಿಸಲು ಪ್ರಸಕ್ತ 2022-23ನೇಯ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ಬಿಡುಗಡೆಗೆ ಸರ್ಕಾರ ರೂಪುರೇಶೆಗಳನ್ನು ರೂಪಿಸಿದೆಯೇ;	ತಾಂತ್ರಿಕ ಸಮಿತಿಯು ಹಾಗೂ ಕನ್ಸಲ್ಟೆನ್ಸಿ ಸಂಸ್ಥೆಯು ನೀಡುವ ವರದಿಗಳನ್ನು ಆಧರಿಸಿ ಕಾರ್ಖಾನೆಯನ್ನು ಪ್ರಾರಂಭಿಸಲು ಅಗತ್ಯವಿರುವ ಅನುದಾನದ ಕುರಿತು ರೂಪುರೇಷೆಗಳನ್ನು ಸಿದ್ಧಪಡಿಸಲಾಗುವುದು.
(ಇ)	ಸದರಿ ಕಾರ್ಖಾನೆಯಿಂದ ಎಷ್ಟು ಮೆಟ್ರಿಕ್ ಟನ್ ಕಬ್ಬು ಅರೆಯುವ ಗುರಿ ಹೊಂದಿದೆ;	ಸ್ಥಾಪಿತ 5000 ಟಿ.ಸಿ.ಡಿ ಸಾಮರ್ಥ್ಯ ವನ್ನು ಪೂರ್ಣವಾಗಿ ಬಳಸಿಕೊಂಡು ಕಾರ್ಖಾನೆಯ ಮೀಸಲು ಕ್ಷೇತ್ರದಲ್ಲಿ ಲಭ್ಯವಾಗುವ ಅಂದಾಜು 7 ಲಕ್ಷ ಟನ್ ಕಬ್ಬನ್ನು ನುರಿಸುವ ದಿಸೆಯಲ್ಲಿ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲಾಗುವುದು.
(ಈ)	ಕಾರ್ಖಾನೆಯನ್ನು ಪುನರಾರಂಭಿಸಲು ಎಷ್ಟು ನೌಕರರ ಅವಶ್ಯಕತೆ ಇದೆ;	ತಾಂತ್ರಿಕ ಸಮಿತಿಯು ಹಾಗೂ ಕನ್ಸಲ್ಟೆನ್ಸಿ ಸಂಸ್ಥೆಯು ನೀಡುವ ವರದಿಗಳನ್ನು ಆಧರಿಸಿ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು ಅಗತ್ಯವಿರುವ ನೌಕರರ ಸಂಖ್ಯೆಯನ್ನು ನಿರ್ಧರಿಸಲಾಗುವುದು.
(ಉ)	ಕಾರ್ಖಾನೆಯ ಪುನಃಶ್ಚೇತನಕ್ಕಾಗಿ ರಚಿಸಲಾಗಿದ್ದ ಟೆಕ್ನಿಕಲ್ ಕಮಿಟಿಯು ಸರ್ಕಾರಕ್ಕೆ ವರದಿಯನ್ನು ನೀಡಿದೆಯೇ; (ನೀಡಿದ್ದಲ್ಲಿ, ವಿವರಗಳನ್ನು ಒದಗಿಸುವುದು);	ಸರ್ಕಾರದ ಆದೇಶ ಸಂಖ್ಯೆ: ಸಿಐ 326 ಸಿಓಎಫ್ 2021 ದಿನಾಂಕ:02.12.2021ರಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000 ರಡಿಯಲ್ಲಿ 14 ದಿನಗಳ ಅಲ್ಪಾವಧಿ ಟೆಂಡರ್ ಕರೆದು ಕನ್ಸಲ್ಟೆನ್ಸಿ ಸೇವೆಯನ್ನು ಪಡೆಯಲು ಆದೇಶಿಸಿದೆ. ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: MSCO/AC/CFO/147/2021-22, ದಿನಾಂಕ: 31.12.2021 ರಂದು ತಾಂತ್ರಿಕ ವರದಿಯನ್ನು ತಯಾರಿಸಲು ಕನ್ಸಲ್ಟೆನ್ಸಿ ಸೇವೆಯನ್ನು ಪಡೆಯಲು 14 ದಿನಗಳ ಅಲ್ಪಾವಧಿ ಟೆಂಡರ್ ಅನ್ನು ಆಹ್ವಾನಿಸಲಾಗಿತ್ತು. ಆದರೆ ಈ ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದೇ ಟೆಂಡರ್ ಗಳು ಸ್ವೀಕೃತಗೊಂಡಿರುವುದಿಲ್ಲ. ಮರು ಟೆಂಡರ್ ಆಹ್ವಾನಿಸಲು ಸಮಯದ ಅಭಾವವಿರುವುದರಿಂದ ಸಕ್ಕರೆ ಉದ್ದಿಮೆಗಳಿಗೆ ತಾಂತ್ರಿಕ ವರದಿಯನ್ನು ತಯಾರಿಸುವ ಕನ್ಸಲ್ಟೆನ್ಸಿ ಸಂಸ್ಥೆಗಳಿಂದ ಸೇವೆಯನ್ನು ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕ ಅಧಿನಿಯಮ 1999 ರಡಿಯಲ್ಲಿ 4ಜಿ ವಿನಾಯಿತಿ ಪಡೆಯುವ ಸಂಬಂಧ ಆರ್ಥಿಕ ಇಲಾಖೆಯಲ್ಲಿ ಪರಿಶೀಲನಾ ಹಂತದಲ್ಲಿರುತ್ತದೆ.
(ಊ)	ಪ್ರಸಕ್ತ ಸಾಲಿನಲ್ಲಿ ಕಾರ್ಖಾನೆಗೆ ಮೀಸಲಿಟ್ಟಿರುವ ಹಣ ಎಷ್ಟು?	2021-22ನೇ ಸಾಲಿನ ಆಯವ್ಯಯದಲ್ಲಿ ಮೈಸೂರು ಸಕ್ಕರೆ ಕಂಪನಿಗೆ ಯಾವುದೇ ಹಣ ಹಂಚಿಕೆಯಾಗಿರುವುದಿಲ್ಲ.

ಸಂಖ್ಯೆ: ಸಿಐ 42 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ, ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು